**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ನಿರಾಣಿ ಹಣಮಂತ್ ರುದ್ರಪ್ಪ ಇವರು ನಿಯಮ 72 ರಡಿಯಲ್ಲಿ ಗಮನ ಸೆಳೆಯುವ ಸೂಚನೆಗೆ ಉತ್ತರ**

**ವಿಷಯ:** ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲೂಕಿನಲ್ಲಿ ಕೃಷ್ಣ ನದಿಗೆ ಅಡ್ಡಲಾಗಿ ನಿರ್ಮಿಸಲಾಗಿರುವ ಹಿಪ್ಪರಗಿ ಬ್ಯಾರೇಜ್ ಗೇಟ್ ಕಿತ್ತು ಹೋಗಿ ಸುಮಾರು 5-6 ದಿನಗಳಲ್ಲಿ ಸರಿಸುಮಾರು 2 ರಿಂದ 3 ಟಿ.ಎಂ.ಸಿ ನೀರು ಖಾಲಿಯಾಗಿದೆ. ಸರ್ಕಾರದ ನಿರ್ಲಕ್ಷ್ಯತನದಿಂದ ಈ ಘಟನೆ ಸಂಭವಿಸಿದೆ ಹಾಗೂ ಸದರಿ ಬ್ಯಾರೇಜಿನ ಸಂಪೂರ್ಣ ಗೇಟ್‌ಗಳನ್ನು ದುರಸ್ತಿ ಕಾಮಗಾರಿಯನ್ನು ಈ ಕೂಡಲೇ ಮಾಡುವ ಬಗ್ಗೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.

ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲ್ಲೂಕಿನ ಹಿಪ್ಪರಗಿ ಗ್ರಾಮದ ಹತ್ತಿರ ಕೃಷ್ಣಾ ನದಿಗೆ ಅಡ್ಡಲಾಗಿ ಹಿಪ್ಪರಗಿ ಬ್ಯಾರೇಜನ್ನು ನಿರ್ಮಿಸಲಾಗಿದ್ದು, 6.00 ಟಿಎಂಸಿ ನೀರಿನ ಶೇಖರಣೆ ಸಾಮರ್ಥ್ಯದೊಂದಿಗೆ 22 ವರ್ಟಿಕಲ್ ಕ್ರಸ್ಟ್ ಗೇಟುಗಳನ್ನು ಹೊಂದಿದ

ದಿನಾಂಕ:06.01.2026 ರಂದು ಹಿಪ್ಪರಗಿ ಬ್ಯಾರೇಜಿನ ಗೇಟ್ ಸಂ.22 ರ ಸರ್ವಿಸ್ ಗೇಟಿನ ಮೇಲಿನಿಂದ 2ನೇ ಎಲಿಮೆಂಟ್ ನೀರಿನ ಒತ್ತಡಕ್ಕೆ ಕಿತ್ತುಹೋದ ನಂತರ ತುರ್ತು ಸ್ಟಾಪ್‌ಲಾಗ್ ಗೇಟುಗಳನ್ನು ದಿನಾಂಕ:09.01.2026 ರಂದು ಅಳವಡಿಸಿ ನೀರಿನ ಹೊರ ಹರಿವನ್ನು ತಡೆಹಿಡಿಯಲಾಗಿರುತ್ತದೆ.

ದಿನಾಂಕ:09.01.2026 ರಂದು ಬಾಗಲಕೋಟೆ ಜಿಲ್ಲಾಧಿಕಾರಿ ಹಾಗೂ ಬೆಳಗಾವಿ ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ ಜರುಗಿದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ನಡವಳಿಗಳಂತೆ ಹಿಪ್ಪರಗಿ ಬ್ಯಾರೇಜಿನ ಮೇಲ್ಭಾಗದ ನದಿ ಪಾತ್ರದಲ್ಲಿ ನೀರಾವರಿಗೆ ಬೇಸಿಗೆಕಾಲ ಮುಕ್ತಾಯವಾಗುವವರೆಗೆ ವಿದ್ಯುತ್/ ನೀರಿನ ಹರಿವಿನ ನಿಯಂತ್ರಣ ಸಾಧಿಸಿ ಮುಂದಿನ ದಿನಗಳಲ್ಲಿ ನೀರು ಪೋಲಾಗುವುದನ್ನು ತಡೆಗಟ್ಟಲು ಕ್ರಮ ವಹಿಸಿ ಕುಡಿಯುವ ನೀರಿಗೆ ಹಾಗೂ ರೈತರ ಬೆಳೆ ಸಂರಕ್ಷಣೆಯ ನೀರನ್ನು ಪೂರೈಸಲಾಗುವುದು.

ಜಿಎಲ್‌ಬಿಸಿ ಮತ್ತು ಅದರ ಅಚ್ಚುಕಟ್ಟು ಪ್ರದೇಶವು ಹಿಪ್ಪರಗಿ ಬ್ಯಾರೇಜಿನ ಮೇಲ್ಭಾಗದಲ್ಲಿರುವುದರಿಂದ, ಅಚ್ಚುಕಟ್ಟಿನ Regenerated return ಮೂಲಕ ಹಿಪ್ಪರಗಿ ಬ್ಯಾರೇಜಿಗೆ 400 ಕ್ಯೂಸೆಕ್ಸ್‌ನಷ್ಟು ನೀರಿನ ಒಳಹರಿವು ಇದ್ದು, ಬ್ಯಾರೇಜಿನಲ್ಲಿ ದಿ: 09.03.2026ರಂದು 3.27 ಟಿ.ಎಂ.ಸಿ. ನೀರಿನ ಸಂಗ್ರಹಣೆಯಾಗಿದ್ದು, ಕುಡಿಯುವ ನೀರಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ಮುನ್ನೆಚ್ಚರಿಕೆ ಕ್ರಮವನ್ನು ಕೈಗೊಳ್ಳಲು ಕ್ರಮವಹಿಸಲಾಗುತ್ತಿದೆ.

ಹಿಪ್ಪರಗಿ ಬ್ಯಾರೇಜ್ ಗೇಟ್ ನಂ.22 ಅನ್ನು ಬದಲಾಯಿಸುವ ರೂ 1.40 ಕೋಟಿ ಮೊತ್ತದ ಕಾಮಗಾರಿಯನ್ನು ಟೆಂಡರ್ ಆಧಾರದ ಮೇಲೆ ಗುತ್ತಿಗೆ ವಹಿಸಲಾಗಿದ್ದು, ಕಾಮಗಾರಿಯು ಪ್ರಗತಿಯಲ್ಲಿರುತ್ತದೆ.

ಹಿಪ್ಪರಗಿ ಬ್ಯಾರೇಜಿನಲ್ಲಿ 3.27 ಟಿ.ಎಂ.ಸಿ ನೀರು ಸಂಗ್ರಹವಿದ್ದು, ಮುಂಬರುವ ಬೇಸಿಗೆಯಲ್ಲಿ ಕುಡಿಯುವ ನೀರಿನ ಕೊರತೆ ಉಂಟಾದಲ್ಲಿ ಮಹಾರಾಷ್ಟ್ರದ ವಾರಣಾ ಅಥವಾ ಕೊಯ್ನಾ ಜಲಾಶಯಗಳಿಂದ ಕೃಷ್ಣಾ ನದಿ ಪಾತ್ರದಲ್ಲಿ ಹಿಪ್ಪರಗಿ ಬ್ಯಾರೇಜಿಗೆ ಅವಶ್ಯವಿರುವ ನೀರನ್ನು ಪಡೆಯಲು ಕ್ರಮವಹಿಸಲಾಗುವುದು.

ಕರ್ನಾಟಕ ನೀರಾವರಿ (ತಿದ್ದುಪಡಿ) ಅಧಿನಿಯಮ 2024 ಹಾಗೂ ನಿಯಮಾವಳಿಗಳನ್ವಯ ಅನಧಿಕೃತ ಪಂಪ್‌ಸೆಟ್‌ಗಳನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗುವುದು.

ಇನ್ನುಳಿದ 21 ಗೇಟ್‌ಗಳ ಕುರಿತು ಅಣೆಕಟ್ಟು ಸುರಕ್ಷತಾ ಸಮಿತಿಯ ಪರಿವೀಕ್ಷಣಾ ವರದಿಯನ್ವಯ ಮುಂದಿನ ಕ್ರಮ ಕೈಗೊಳ್ಳಲಾಗುವುದು.

**ಸಂಖ್ಯೆ: ಜಸಂಇ 39 ಡಬ್ಲ್ಯೂಎಲ್ಎ 2026**

**(ಡಿ.ಕೆ.ಶಿವಕುಮಾರ್)**
**ಉಪ ಮುಖ್ಯಮಂತ್ರಿಗಳು**